# All India Radio: Bangalore
# National Bulletin In Kannada
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

02.03.2026 19.35 p.m.

**************

ಮುಖ್ಯಾಂಶಗಳು

- ಭಾರತ-ಕೆನಡಾ ನಡುವೆ ಮೂರು ಪ್ರಮುಖ ಒಪ್ಪಂದಗಳಿಗೆ ಸಹಿ; ದ್ವಿಪಕ್ಷೀಯ ಸಹಭಾಗಿತ್ವ ಬಲವರ್ಧನೆಗೆ ಒತ್ತು
- ರಾಷ್ಟ್ರದ ಆಡಳಿತ ವ್ಯವಸ್ಥೆಯನ್ನು ಬಲಪಡಿಸಲು ಐಎಎಸ್ ಅಧಿಕಾರಿಗಳಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ
- ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ಮತ್ತಷ್ಟು ಉಲ್ಬಣ; ಇರಾನ್ ಹಾಗೂ ಇಸ್ರೇಲ್-ಅಮೆರಿಕಾ ಜಂಟಿ ಪಡೆಗಳ ನಡುವೆ ದಾಳಿ, ಪ್ರತಿದಾಳಿ
- ಪಶ್ಚಿಮ ಏಷ್ಯಾ ಪರಿಸ್ಥಿತಿ ಕುರಿತು ಸೌದಿ ಅರೇಬಿಯಾ ರಾಜಕುಮಾರರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ
- ಫೆಬ್ರವರಿ ತಿಂಗಳಲ್ಲಿ ಭಾರತದ ಕಲ್ಲಿದ್ದಲು ಉತ್ಪಾದನೆ ಶೇಕಡಾ ೧೮.೫೧ ರಷ್ಟು ಏರಿಕೆ

****************

ಭಾರತ ಮತ್ತು ಕೆನಡಾ ಇಂದು ನಿರ್ಣಾಯಕ ಖನಿಜ ಸಹಕಾರ, ನವೀಕರಿಸಬಹುದಾದ ಇಂಧನ ಬಳಕೆ ಮತ್ತು ಸಾಂಸ್ಕೃತಿಕ ವಿನಿಮಯ ಸೇರಿದಂತೆ ಮೂರು ಪ್ರಮುಖ ಕ್ಷೇತ್ರಗಳಲ್ಲಿ ಒಪ್ಪಂದಗಳನ್ನು ಮಾಡಿಕೊಂಡಿವೆ.

ನವದೆಹಲಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಅವರ ನಡುವೆ ನಡೆದ ನಿಯೋಗ ಮಟ್ಟದ ಮಾತುಕತೆಯ ನಂತರ ಈ ಒಪ್ಪಂದಗಳಿಗೆ ಸಹಿ ಹಾಕಲಾಯಿತು.

ಉಭಯ ನಾಯಕರು ಭಾರತ-ಕೆನಡಾ ಸಹಭಾಗಿತ್ವದ ವಿವಿಧ ಆಯಾಮಗಳ ಪ್ರಗತಿಯನ್ನು ಪರಿಶೀಲಿಸಿದರು.

ಮಾತುಕತೆಯ ನಂತರ ಜಂಟಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಪಶ್ಚಿಮ ಏಷ್ಯಾದ ಪ್ರಸಕ್ತ ಪರಿಸ್ಥಿತಿಯು ತೀವ್ರ ಕಳವಳಕಾರಿಯಾಗಿದ್ದು, ಎಲ್ಲಾ ವಿವಾದಗಳನ್ನು ಮಾತುಕತೆ ಮತ್ತು ರಾಜತಾಂತ್ರಿಕತೆಯ ಮೂಲಕ ಪರಿಹರಿಸುವುದನ್ನು ಭಾರತ ಬೆಂಬಲಿಸುತ್ತದೆ ಎಂದು ತಿಳಿಸಿದರು.

೨೦೩೦ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರವನ್ನು ೫೦ ಬಿಲಿಯನ್ ಡಾಲರ್‌ಗಳಿಗೆ ವಿಸ್ತರಿಸುವ ಮಹತ್ವಾಕಾಂಕ್ಷೆಯ ಗುರಿಯನ್ನು ಉಭಯ ದೇಶಗಳು ಹೊಂದಿವೆ ಎಂದು ಪ್ರಧಾನಿ ಘೋಷಿಸಿದರು. ಇದರೊಂದಿಗೆ ಭಾರತ-ಕೆನಡಾ ರಕ್ಷಣಾ ಸಂವಾದವನ್ನು ಸ್ಥಾಪಿಸಲು ನಿರ್ಧರಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಮಾತನಾಡಿ, ಕೆನಡಾ, ಭಾರತದೊಂದಿಗೆ ಹೊಸ ಅಧ್ಯಾಯವನ್ನು ಆರಂಭಿಸುತ್ತಿದ್ದು, ವ್ಯಾಪಾರ, ರಕ್ಷಣೆ ಮತ್ತು ಇಂಧನ ಕ್ಷೇತ್ರದಲ್ಲಿ ಸಹಕಾರ ಹೆಚ್ಚಿಸುತ್ತಿದೆ ಎಂದರು. ನಂತರ ಉಭಯ ನಾಯಕರು 'ಭಾರತ-ಕೆನಡಾ ಮುಖ್ಯ ಕಾರ್ಯನಿರ್ವಹಕಾಧಿಕಾರಿಗಳು ವೇದಿಕೆ ಸಮಾರಂಭದಲ್ಲಿ ಭಾಗವಹಿಸಿದರು. ಈ ವೇಳೆ ಮಾತನಾಡಿದ ಪ್ರಧಾನಿ, ಬಲವಾದ ದೇಶೀಯ ಬೇಡಿಕೆ, ಯುವ ಜನಸಂಖ್ಯೆ ಮತ್ತು ಡಿಜಿಟಲ್ ತಂತ್ರಜ್ಞಾನದ ಬಲದಿಂದಾಗಿ ಭಾರತವು ಇಂದು ವಿಶ್ವದ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿದೆ ಎಂದು ಪ್ರತಿಪಾದಿಸಿದರು.

****************

ರಾಷ್ಟ್ರ ನಿರ್ಮಾಣ ಪ್ರಕ್ರಿಯೆಯಲ್ಲಿ ಭಾರತೀಯ ಆಡಳಿತ ಸೇವೆ -ಐಎಎಸ್ ಅಧಿಕಾರಿಗಳು ನಿರ್ಣಾಯಕ ಪಾತ್ರ ವಹಿಸಬೇಕಿದ್ದು, ದೇಶಾದ್ಯಂತ ಆಡಳಿತವನ್ನು ಬಲಪಡಿಸಲು ಇಲಾಖೆಗಳ ಮಿತಿಗಳನ್ನು ಮೀರಿ ಕಾರ್ಯನಿರ್ವಹಿಸಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದ್ದಾರೆ.

ಲಾಲ್ ಬಹದ್ದೂರ್ ಶಾಸ್ತ್ರಿ ರಾಷ್ಟ್ರೀಯ ಆಡಳಿತ ಅಕಾಡೆಮಿಯಲ್ಲಿ ೧೨೮ನೇ ಪ್ರವೇಶ ತರಬೇತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿರುವ ಹಾಗೂ ರಾಜ್ಯ ನಾಗರಿಕ ಸೇವೆಗಳಿಂದ ಐಎಎಸ್‌ಗೆ ಪದೋನ್ನತಿ ಹೊಂದಿರುವ ಅಧಿಕಾರಿಗಳ ವರ್ಗ ಇಂದು ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿಯವರನ್ನು ಭೇಟಿ ಮಾಡಿತು.

ಈ ಸಂದರ್ಭದಲ್ಲಿ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ, ಅಧಿಕಾರಿಗಳು ಕೇವಲ ಜಿಲ್ಲೆ ಅಥವಾ ರಾಜ್ಯದ ಆದ್ಯತೆಗಳಿಗೆ ಸೀಮಿತವಾಗದೆ ಅದನ್ನೂ ಮೀರಿ ಹೆಚ್ಚಿನ ಜವಾಬ್ದಾರಿಗಳನ್ನು ಹೊರಬೇಕಿದೆ ಎಂದು ತಿಳಿಸಿದರು. ದೊಡ್ಡ ಜವಾಬ್ದಾರಿಗಳನ್ನು ನಿಭಾಯಿಸಲು ಆಡಳಿತಾತ್ಮಕ ಅಡೆತಡೆಗಳನ್ನು ನಿವಾರಿಸುವ ಮತ್ತು ಸಹಯೋಗವನ್ನು ಉತ್ತೇಜಿಸುವ ವಿಶಾಲ ರಾಷ್ಟ್ರೀಯ ದೃಷ್ಟಿಕೋನದ ಅಗತ್ಯವಿದೆ. ಆಡಳಿತ ವ್ಯವಸ್ಥೆಯನ್ನು ಬಲಪಡಿಸಲು ಸಾಮೂಹಿಕ ವೃತ್ತಿಪರತೆ, ಸಮನ್ವಯ ಮತ್ತು ಬದ್ಧತೆ ಅತ್ಯಗತ್ಯ ಎಂದು ತಿಳಿಸಿದರು.

ಅಧಿಕಾರಿಗಳು ತೆಗೆದುಕೊಳ್ಳುವ ಪ್ರತಿಯೊಂದು ನಿರ್ಧಾರವೂ ೨೦೪೭ರ ವೇಳೆಗೆ ’ವಿಕಸಿತ ಭಾರತ’ ನಿರ್ಮಿಸುವ ದೃಷ್ಟಿಕೋನಕ್ಕೆ ಅನುಗುಣವಾಗಿರಬೇಕು. ಭೌಗೋಳಿಕ, ಸಾಮಾಜಿಕ ಅಥವಾ ಆರ್ಥಿಕ ಕಾರಣಗಳಿಂದಾಗಿ ಯಾವುದೇ ಸಮುದಾಯವು ಅಭಿವೃದ್ಧಿಯ ಪಥದಲ್ಲಿ ಹಿಂದುಳಿಯದಂತೆ ಅಧಿಕಾರಿಗಳು ಖಚಿತಪಡಿಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

****************

ಪಶ್ಚಿಮ ಏಷ್ಯಾದಲ್ಲಿ ಯುದ್ಧದ ಪರಿಸ್ಥಿತಿ ತೀವ್ರಗೊಂಡಿದ್ದು, ಇರಾನ್‌ನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಹತ್ಯೆಯ ಬೆನ್ನಲ್ಲೇ ಇರಾನ್ ಮತ್ತು ಇಸ್ರೇಲ್-ಅಮೆರಿಕ ಜಂಟಿ ಪಡೆಗಳು ಪರಸ್ಪರ ಭೀಕರ ಕ್ಷಿಪಣಿ ಹಾಗೂ ಡ್ರೋನ್ ದಾಳಿಗಳನ್ನು ನಡೆಸಿವೆ.

ಇರಾನ್ ಬೆಂಬಲಿತ ಗುಂಪುಗಳು ಯುಎಇ, ಕುವೈತ್ ಮತ್ತು ಬಹ್ರೇನ್‌ನಲ್ಲಿರುವ ಅಮೆರಿಕದ ಆಸ್ತಿಗಳ ಮೇಲೆ ದಾಳಿ ಮುಂದುವರಿಸಿವೆ. ಇತ್ತ ಅಮೆರಿಕದ ಬಿ-೨ ಸ್ಟೆಲ್ತ್ ಬಾಂಬರ್‌ಗಳು ಇರಾನ್‌ನ ಬ್ಯಾಲಿಸ್ಟಿಕ್ ಕ್ಷಿಪಣಿ ನೆಲೆಗಳನ್ನು ಧ್ವಂಸಗೊಳಿಸಿವೆ.

ಈ ನಡುವೆ ಕುವೈತ್‌ನಲ್ಲಿ ಅಮೆರಿಕದ ಮೂರು ಎಫ್-೧೫ಇ ಯುದ್ಧ ವಿಮಾನಗಳು ಆಕಸ್ಮಿಕವಾಗಿ ಅಲ್ಲಿನ ರಕ್ಷಣಾ ಪಡೆಯ ಗುಂಡಿಗೆ ಪತನಗೊಂಡಿದ್ದು, ಆರು ಮಂದಿ ಸಿಬ್ಬಂದಿಯನ್ನು ರಕ್ಷಿಸಲಾಗಿದೆ.

ಈ ಸಂಘರ್ಷವು ಗಲ್ಫ್ ರಾಷ್ಟ್ರಗಳ ಇಂಧನ ಮತ್ತು ಸಾರಿಗೆ ವಲಯದ ಮೇಲೆ ತೀವ್ರ ಪರಿಣಾಮ ಬೀರಿದೆ. ಓಮನ್ ಕರಾವಳಿಯಲ್ಲಿ ತೈಲ ಟ್ಯಾಂಕರ್ ಮೇಲೆ ನಡೆದ ದಾಳಿಯಲ್ಲಿ ಓರ್ವ ಸಿಬ್ಬಂದಿ ಮೃತಪಟ್ಟರೆ, ಕತಾರ್‌ನ ಇಂಧನ ಕೇಂದ್ರಗಳ ಮೇಲೆ ಕ್ಷಿಪಣಿ ದಾಳಿಯಾಗಿದೆ. ಸೌದಿ ಅರೇಬಿಯಾದ ರಾಸ್ ತನೂರಾ ತೈಲ ಸಂಸ್ಕರಣಾ ಕೇಂದ್ರದ ಮೇಲೆ ನಡೆದ ಡ್ರೋನ್ ದಾಳಿಯನ್ನು ತಡೆಯಲಾಗಿದ್ದು, ಮುನ್ನೆಚ್ಚರಿಕೆಯಾಗಿ ಸಂಸ್ಕರಣಾ ಕೇಂದ್ರವನ್ನು ಮುಚ್ಚಲಾಗಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇರಾನ್‌ನ ಒಂಬತ್ತು ಯುದ್ಧನೌಕೆಗಳನ್ನು ಹೊಡೆದುರುಳಿಸಿರುವುದಾಗಿ ತಿಳಿಸಿದ್ದು, ಇತ್ತ ಇರಾನ್‌ನ ನಟಾಂಜ್ ಪರಮಾಣು ಕೇಂದ್ರದ ಮೇಲೆಯೂ ದಾಳಿ ನಡೆದಿರುವುದನ್ನು ಅಧಿಕಾರಿಗಳು ಖಚಿತಪಡಿಸಿದ್ದಾರೆ.

ಕುವೈತ್‌ನಲ್ಲಿ ಇರಾನ್ ನಡೆಸಿದ ದಾಳಿಯಲ್ಲಿ ನಾಲ್ಕು ಅಮೆರಿಕಾ ಸೈನಿಕರು ಹತರಾಗಿದ್ದು, ಐವರಿಗೆ ಗಾಯಗಳಾಗಿವೆ.

ರೆಡ್ ಕ್ರೆಸೆಂಟ್ ಸಂಸ್ಥೆಯ ವರದಿ ಪ್ರಕಾರ ಅಮೆರಿಕಾ-ಇಸ್ರೇಲ್ ಜಂಟಿ ದಾಳಿಯ ಪರಿಣಾಮ ಇರಾನ್‌ನಾದ್ಯಂತ ೫೫೫ ಮಂದಿ ಮೃತಪಟ್ಟಿದ್ದಾರೆ.

ಮತ್ತೊಂದೆಡೆ, ಇಸ್ರೇಲ್ ಮೇಲೆ ಲೆಬನಾನ್‌ನ ಹೆಜ್ಬೊಲ್ಲಾ ಸಂಘಟನೆಯು ನಡೆಸಿದ ಕ್ಷಿಪಣಿ ದಾಳಿಗೆ ಪ್ರತಿಯಾಗಿ ಇಸ್ರೇಲ್, ಬೇಹರೂತ್ ಮೇಲೆ ದಾಳಿ ನಡೆಸಿದ್ದು, ೩೧ ಜನರು ಸಾವನ್ನಪ್ಪಿದ್ದಾರೆ. ಯುದ್ಧದ ಹಿನ್ನೆಲೆಯಲ್ಲಿ ಗಾಜಾಕ್ಕೆ ಹೋಗುವ ಮಾನವೀಯ ನೆರವಿನ ಮಾರ್ಗಗಳನ್ನು ಇಸ್ರೇಲ್ ಬಂದ್ ಮಾಡಿದೆ. ಜೋರ್ಡಾನ್ ತನ್ನ ವೈಮಾನಿಕ ಮಾರ್ಗವನ್ನು ಪ್ರತಿದಿನ ನಿರ್ದಿಷ್ಟ ಅವಧಿಗೆ ಸ್ಥಗಿತಗೊಳಿಸಲು ನಿರ್ಧರಿಸಿದೆ. ವಿಶ್ವ ಆರೋಗ್ಯ ಸಂಸ್ಥೆಯು ನಾಗರಿಕರು ಮತ್ತು ಆರೋಗ್ಯ ಕೇಂದ್ರಗಳ ರಕ್ಷಣೆಗೆ ಮನವಿ ಮಾಡಿದ್ದು, ಇಡೀ ಪ್ರದೇಶದಲ್ಲಿ ಉದ್ವಿಗ್ನತೆ ಮುಂದುವರಿದಿದೆ.

****************

ಪ್ರಧಾನಿ ನರೇಂದ್ರ ಮೋದಿ ಅವರಿಂದ ಸೌದಿ ಅರೇಬಿಯಾ ರಾಜಕುಮಾರ ಮೊಹಮ್ಮದ್ ಬಿನ್ ಸಲ್ಮಾನ್ ಅವರೊಂದಿಗೆ ಪಶ್ಚಿಮ ಏಷ್ಯಾದಲ್ಲಿ ಉಲ್ಬಣಗೊಳ್ಳುತ್ತಿರುವ ಪರಿಸ್ಥಿತಿಯ ಕುರಿತು ದೂರವಾಣಿ ಸಂಭಾಷಣೆ ನಡೆಸಿ ಚರ್ಚಿಸಿದ್ದಾರೆ.

ಸೌದಿ ಅರೇಬಿಯಾ ಮೇಲೆ ಇತ್ತೀಚೆಗೆ ನಡೆದ ದಾಳಿಗಳನ್ನು ತೀವ್ರವಾಗಿ ಖಂಡಿಸಿದ ಪ್ರಧಾನಿ, ಇವು ಆ ದೇಶದ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಯ ಉಲ್ಲಂಘನೆಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಈ ಸಂಕಷ್ಟದ ಸಮಯದಲ್ಲಿ ಭಾರತೀಯ ಸಮುದಾಯದ ಯೋಗ ಕ್ಷೇಮವನ್ನು ಕಾಪಾಡುತ್ತಿರುವ ರಾಜಕುಮಾರ ಮೊಹಮ್ಮದ್ ಬಿನ್ ಸಲ್ಮಾನ್ ಅವರಿಗೆ ಪ್ರಧಾನಿ ಕೃತಜ್ಞತೆ ಸಲ್ಲಿಸಿದ್ದಾರೆ.

ಇದರ ಜೊತೆಗೆ ಪ್ರಧಾನಿ, ಬಹರೇನ್ ದೊರೆ ಹಮದ್ ಬಿನ್ ಇಸಾ ಅಲ್ ಖಲೀಫಾ ಅವರೊಂದಿಗೂ ಚರ್ಚೆ ನಡೆಸಿ, ಬಹರೇನ್ ಮೇಲಿನ ದಾಳಿಯನ್ನು ಖಂಡಿಸಿದ್ದಾರೆ.

****************

ಭಾರತದ ಕಲ್ಲಿದ್ದಲು ಉತ್ಪಾದನೆ, ಫೆಬ್ರವರಿ ತಿಂಗಳಲ್ಲಿ ಗಮನಾರ್ಹ ಪ್ರಗತಿ ಸಾಧಿಸಿದ್ದು, ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇಕಡಾ ೧೮.೫೧ ರಷ್ಟು ಏರಿಕೆ ಕಂಡಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಈ ಅವಧಿಯಲ್ಲಿ ವಾಣಿಜ್ಯ ಮತ್ತು ಸ್ವಂತ ಬಳಕೆಯ ಕಲ್ಲಿದ್ದಲು ಗಣಿಗಳಿಂದ ಒಟ್ಟು ಉತ್ಪಾದನೆಯು ೨೦.೪೯ ದಶಲಕ್ಷ ಟನ್ ತಲುಪಿದ್ದರೆ, ಕಲ್ಲಿದ್ದಲು ಪೂರೈಕೆಯು ೧೭.೭೨ ದಶಲಕ್ಷ ಟನ್ ದಾಖಲಾಗಿದೆ.

ಪ್ರಸಕ್ತ ಹಣಕಾಸು ವರ್ಷದ ಫೆಬ್ರವರಿವರೆಗಿನ ಒಟ್ಟು ಕಲ್ಲಿದ್ದಲು ಉತ್ಪಾದನೆಯು ಶೇಕಡಾ ೧೧.೫೮ ರಷ್ಟು ವೃದ್ಧಿಯಾಗಿದ್ದು, ಕಲ್ಲಿದ್ದಲು ವಿತರಣೆಯು ಶೇಕಡಾ ೬.೭೮ ರಷ್ಟು ಬೆಳವಣಿಗೆ ಕಂಡಿದೆ. ಗಣಿಗಾರಿಕೆ ವಲಯದಲ್ಲಿನ ಸುಧಾರಿತ ಕಾರ್ಯಾಚರಣೆ ಸಾಮರ್ಥ್ಯ, ಉತ್ಪಾದನಾ ಸಾಮರ್ಥ್ಯದ

ಹೆಚ್ಚಳ ಮತ್ತು ಗಣಿಗಾರಿಕೆ ಪ್ರಕ್ರಿಯೆಯ ವಿವಿಧ ಹಂತಗಳ ನಡುವಿನ ಉತ್ತಮ ಸಮನ್ವಯವು ಈ ನಿರಂತರ ಬೆಳವಣಿಗೆಗೆ ಕಾರಣವಾಗಿದೆ ಎಂದು ಸಚಿವಾಲಯ ತಿಳಿಸಿದೆ.

ದೇಶದ ಹೆಚ್ಚುತ್ತಿರುವ ಇಂಧನ ಅಗತ್ಯಗಳನ್ನು ಪೂರೈಸಲು ಸ್ಥಿರವಾದ ಉತ್ಪಾದನೆಯನ್ನು ಕಾಯ್ದುಕೊಳ್ಳುವುದು ಮತ್ತು ಪೂರೈಕೆಯಲ್ಲಿ ಯಾವುದೇ ಅಡೆತಡೆಗಳು ಉಂಟಾಗದಂತೆ ನೋಡಿಕೊಳ್ಳುವತ್ತ ಸರ್ಕಾರ ಗಮನಹರಿಸಿದೆ.

***************

ನವದೆಹಲಿಯಲ್ಲಿ ಇಂದು ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಪ್ರಕಟಣಾ ವಿಭಾಗ ಹೊರ ತಂದಿರುವ ಒಟ್ಟು ೧೯ ಪುಸ್ತಕಗಳನ್ನು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಬಿಡುಗಡೆ ಮಾಡಿದರು.

ತಮಿಳು ಭಾಷೆಯಲ್ಲಿರುವ ೧೪ ಹಾಗೂ ಹಿಂದಿ ಮತ್ತು ಆಂಗ್ಲ ಭಾಷೆಯಲ್ಲಿರುವ ತಲಾ ಒಂದು ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಹಾಗೂ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್. ಮುರುಗನ್ ಉಪಸ್ಥಿತರಿದ್ದರು.

***************

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಜಿತೇಂದ್ರ ಸಿಂಗ್ ಅವರಿಂದು ನವದೆಹಲಿಯಲ್ಲಿ ಅಮೆರಿಕಾದ ಡೆಲವೇರ್ ಗವರ್ನರ್ ಮ್ಯಾಟ್ ಮೇಯೆರ್ ಅವರ ನೇತೃತ್ವದ ನಿಯೋಗದೊಂದಿಗೆ ಮಾತುಕತೆ ನಡೆಸಿದರು.

ಈ ವೇಳೆ, ಸುಧಾರಿತ ಜೈವಿಕ ಉತ್ಪಾದನಾ ಕ್ಷೇತ್ರದಲ್ಲಿ ವ್ಯವಸ್ಥಿತವಾದ ಭಾರತ ಡೆಲವೇರ್ ಸಹಭಾಗಿತ್ವವನ್ನು ಬೆಳೆಸುವ ಕುರಿತು ಸಚಿವರು ಚರ್ಚೆ ನಡೆಸಿದರು. ಮಾತುಕತೆಗಳನ್ನು ಸಂಶೋಧನೆ, ಉತ್ಪಾದನೆ ಮತ್ತು ನವೋದ್ಯಮ ಪರಿಸರ ವ್ಯವಸ್ಥೆಯಲ್ಲಿ ಸಹಭಾಗಿತ್ವದ ಮೂಲಕ ಕಾರ್ಯರೂಪಕ್ಕೆ ತರಲು ಒಂದು ಸಣ್ಣ ಕಾರ್ಯಕಾರಿ ಗುಂಪಿನ ರಚನೆಯ ಕುರಿತು ಸಚಿವರು ಸಭೆಯಲ್ಲಿ ಪ್ರಸ್ತಾಪಿಸಿದರು.

***************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನವದೆಹಲಿಯಲ್ಲಿಂದು ಏಷ್ಯನ್ ಇಫ್ರಾಸ್ಟ್ರಚ್ಚರ್ ಇನ್‌ವೆಸ್ಟ್‌ಮೆಂಟ್ ಬ್ಯಾಂಕ್-ಎಐಐಬಿ ಬ್ಯಾಂಕ್‌ನ ನೂತನ ಅಧ್ಯಕ್ಷ ಝೌ ಜಿಯಾಯಿ ಅವರನ್ನು ಭೇಟಿ ಮಾಡಿದರು. ಈ ವೇಳೆ ಭಾರತ ಮತ್ತು ಎಐಐಬಿಯ ಪಾಲುದಾರಿಕೆಯನ್ನು ಬಲಪಡಿಸುವ ಕುರಿತು ಚರ್ಚಿಸಲಾಯಿತು.

ಭಾರತದಲ್ಲಿನ ಮೂಲಸೌಕರ್ಯ ವಲಯದ ಸೇವೆಗಳಲ್ಲಿ ಎಐಐಬಿಯ ಪಾಲುದಾರಿಕೆಯ ಮಹತ್ವದ ಕುರಿತು ವಿಸ್ತೃತ ಚರ್ಚೆ ನಡೆದಿದೆ ಎಂದು ಹಣಕಾಸು ಸಚಿವಾಲಯ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದೆ.

****************

ಒಂದು ಟೆಸ್ಟ್ ಪಂದ್ಯ ಮತ್ತು ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಗಾಗಿ ಅಫ್ಘಾನಿಸ್ತಾನ ಕ್ರಿಕೆಟ್ ತಂಡ ಭಾರತ ಪ್ರವಾಸ ಕೈಗೊಳ್ಳಲಿದೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣಾ ಮಂಡಳಿ-ಬಿಸಿಸಿಐ ತಿಳಿಸಿದೆ. ಈ ಪಂದ್ಯಗಳು ಜೂನ್‌ನಲ್ಲಿ ಐಪಿಎಲ್ ಪಂದ್ಯಾವಳಿ ಮುಗಿಯುತ್ತಿದ್ದಂತೆ ನಡೆಯಲಿವೆ.

*******ಮುಕ್ತಾಯ********